# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 550 (642) |
| ಸದಸ್ಯರ ಹೆಸರು | ಶ್ರೀ ಹೆಚ್. ಎಸ್. ಗೋಪಿನಾಥ್<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 11.12.2023 |
| ಉತ್ತರಿಸಬೇಕಾದ ಸಚಿವರು | ಉನ್ನತ ಶಿಕ್ಷಣ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಸ್ಪರ್ಧಾತ್ಮಕ ಪರೀಕ್ಷಾ (IAS, KAS, P.S.I, P.D.O) ತರಬೇತಿಗಾಗಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಖಾಸಗಿ ಕೋಚಿಂಗ್ ಸೆಂಟರ್‌ಗಳ ಸಂಖ್ಯೆ ಎಷ್ಟು; ಇತರೆ ಹುದ್ದೆಗಳ ಕೋಚಿಂಗ್ ಸೆಂಟರ್‌ಗಳ ಜಿಲ್ಲಾವಾರು ಸಂಪೂರ್ಣ ವಿವರಗಳನ್ನು ನೀಡುವುದು; | ಸ್ಪರ್ಧಾತ್ಮಕ ಪರೀಕ್ಷಾ ತರಬೇತಿಗಾಗಿ ಖಾಸಗಿ ಕೋಚಿಂಗ್ ಸೆಂಟರ್ ನೋಂದಾಯಿಸುವ ಸಂಬಂಧ (IAS, KAS, PSI, PDO) ಕಾಲೇಜು ಶಿಕ್ಷಣ ಇಲಾಖೆಯಲ್ಲಿ ಅನುಮತಿ ಕೋರಿ ಯಾವುದೇ ಪ್ರಸ್ತಾವನೆಗಳು ಸ್ವೀಕೃತವಾಗಿರುವುದಿಲ್ಲ. ಆದ್ದರಿಂದ ಕಾಲೇಜು ಶಿಕ್ಷಣ ಇಲಾಖೆಯಿಂದ ಕೋಚಿಂಗ್ ಸೆಂಟರ್‌ಗೆ ಅನುಮತಿ ನೀಡಿರುವುದಿಲ್ಲ. |
| ಆ) | ಹೊಸದಾಗಿ ಇಂತಹ ಕೋಚಿಂಗ್ ಸೆಂಟರ್‌ಗಳನ್ನು ತೆರೆಯಲು ಇರುವ ನಿಯಮ ಹಾಗೂ ಮಾನದಂಡಗಳೇನು; | ಕರ್ನಾಟಕ ಶಿಕ್ಷಣ ಕಾಯ್ದೆ 1983 ರ ಪ್ರಕರಣ 35 ರಲ್ಲಿ ಹಾಗೂ ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 43 ವಿವಿಧ 2000, ದಿನಾಂಕ:05-03-2002 ರಲ್ಲಿ ಕರ್ನಾಟಕ ಶಿಕ್ಷಣ ಕಾಯ್ದೆ-1983ರ ಪ್ರಕರಣ 145ರ ಉಪ ಪ್ರಕರಣ 1 ರಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, **“The Karnataka tutorial institutions (registration and regulation) rules 2001** ಅನ್ನು ರಚಿಸಲಾಗಿರುತ್ತದೆ. ಸದರಿ ಅಧಿಸೂಚನೆಯಲ್ಲಿ ಕೋಚಿಂಗ್ ಸೆಂಟರ್‌ಗಳನ್ನು ತೆರೆಯಲು ಕೆಲವು ಮಾನದಂಡಗಳನ್ನು ರೂಪಿಸಲಾಗಿರುತ್ತದೆ. ಮತ್ತು ಕೋಚಿಂಗ್ ಸೆಂಟರ್‌ಗಳನ್ನು ತೆರೆಯಲು ಸಕ್ಷಮ ಪ್ರಾಧಿಕಾರಗಳನ್ನು ಸಹ ಗುರುತಿಸಲಾಗಿರುತ್ತದೆ.<br>ವಿವರವನ್ನು **ಅನುಬಂಧ-1** ರಲ್ಲಿ ನೀಡಲಾಗಿದೆ. |
| ಇ) | ಈ ಕೋಚಿಂಗ್ ಸೆಂಟರ್‌ಗಳು ವಿಧಿಸುತ್ತಿರುವ ಶುಲ್ಕ ಮತ್ತು ಸರ್ಕಾರಕ್ಕೆ ಬರುತ್ತಿರುವ ಆದಾಯ ತೆರಿಗೆ ಬಗ್ಗೆ ವಿವರ ನೀಡುವುದು; | ಕೋಚಿಂಗ್ ಸೆಂಟರ್‌ಗಳಿಗೆ ಸಂಬಂಧಪಟ್ಟಂತೆ ಜಿ.ಎಸ್.ಟಿ ಹಾಗೂ ಆದಾಯ ತೆರಿಗೆಗಳು ಸಂಬಂಧಪಟ್ಟ ಇಲಾಖೆಗಳ ವ್ಯಾಪ್ತಿಗೆ ಒಳಪಡಲಿದ್ದು, ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಗೆ ಒಳಪಡುವುದಿಲ್ಲ. |

| | | |
|---|---|---|
| **ಈ)** | ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಕೋಚಿಂಗ್ ಸೆಂಟರ್‌ಗಳು ಯಾವ ನಿಯಮಗಳಡಿ ಕಾರ್ಯನಿರ್ವಹಿಸುತ್ತಿವೆ? (ಸಂಪೂರ್ಣ ವಿವರಗಳನ್ನು ನೀಡುವುದು) | **"The Karnataka tutorial institutions (registration and regulation) rules 2001 ರನ್ವಯ** ಕೋಚಿಂಗ್ ಸೆಂಟರ್‌ಗಳು ಕಾರ್ಯನಿರ್ವಹಿಸಬೇಕಾಗಿರುತ್ತದೆ. ಆದರೆ, ಯಾವುದೇ ಕೋಚಿಂಗ್ ಸೆಂಟರ್ ಗಳು ಸಕ್ಷಮ ಪ್ರಾಧಿಕಾರದ ಅನುಮತಿ ಪಡೆದಿರುವುದಿಲ್ಲ. |

ಇಡಿ 322 ಡಿಸಿಇ 2023 (ಇ)

**(ಡಾ. ಎಂ.ಸಿ. ಸುಧಾಕರ್)**
ಉನ್ನತ ಶಿಕ್ಷಣ ಸಚಿವರು